**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ</u>**

**<u>ಸಿ.ಸಿ.ನಂಃ 1860/2023</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**<u>ಆರೋಪಿಃ</u>**

1. ಶ್ರೀ ರಂಗನಾಥ.ಎಸ್,
ಬಿನ್ ಶ್ರೀ ಸಿದ್ದಪ್ಪ,
42 ವರ್ಷಗಳು,
ವಾಸಃ ಬಂದ್ರೆ ಗ್ರಾಮ,
ಅಜ್ಜಂಪುರ ತಾಲ್ಲೂಕು.

2. ಶ್ರೀಮತಿ ಪಾರ್ವತಮ್ಮ,
ಕೋಂ ಶ್ರೀ ಸಿದ್ದಪ್ಪ,
60 ವರ್ಷಗಳು,
ವಾಸಃ ಬಂದ್ರೆ ಗ್ರಾಮ,
ಅಜ್ಜಂಪುರ ತಾಲ್ಲೂಕು.

3. ಶ್ರೀ ಮಂಜುನಾಥ,
ಬಿನ್ ಶ್ರೀ ಸಿದ್ದಪ್ಪ,
32 ವರ್ಷಗಳು,
ವಾಸಃ ಬಂದ್ರೆ ಗ್ರಾಮ,
ಅಜ್ಜಂಪುರ ತಾಲ್ಲೂಕು.

## <u>ದೋಷಾರೋಪಣೆ</u>

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 28.05.2023 ರಂದು ಬೆಳಿಗ್ಗೆ 6.30 ಗಂಟೆ ಸಮಯದಲ್ಲಿ ಅಜ್ಜಂಪುರ ಪೊಲೀಸ್ ಠಾಣಾ ಸರಹದ್ದಿನ ಬಂಡೆ ಗ್ರಾಮದಲ್ಲಿ ಚಾಸಾ-1/ ಶ್ರೀ ಮಲ್ಲಿಕಾರ್ಜುನ ರವರು ಸರ್ವೇ ನಂಬರ್ 12/ಬಿ2 ರ ತೆಂಗಿನ ತೋಟದಲ್ಲಿರುವಾಗ 1 ರಿಂದ 3 ನೇ ಆರೋಪಿತರಾದ ನೀವುಗಳು ಅಪರಾಧವನ್ನು ಮಾಡುವ ಸಮಾನ ಉದ್ದೇಶದಿಂದ ಚಾಸಾ-1 ರವರ ಹತ್ತಿರ ಬಂದು ಇದು ನಮ್ಮ ತೋಟ ಇಲ್ಲಿಗೆ ಯಾಕೆ ಬಂದಿದ್ದಿಯಾ ಎಂದು ಚಾಸಾ-1 ರವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಕೈಯಿಂದ ಚಾಸಾ–1 ರವರ ಕಾಲರ್ ಪಟ್ಟಿ ಹಿಡಿದು ಎಳೆದಾಡಿ ಮೈಕೈಗೆ ಹೊಡಿದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಚಾಸಾ–1 ರವರ ಕೈಯಲ್ಲಿದ್ದ ಕೊನೆಗತ್ತಿಯಿಂದ ಚಾಸಾ–1 ರವರಿಗೆ ಹೊಡಿದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು 8.00 ಗಂಟೆಯಲ್ಲಿ ಚಾಸಾ–1, ಚಾಸಾ–2/ ಶ್ರೀ ಕುಮಾರ್, ಚಾಸಾ–3/ ಶ್ರೀ ಚಂದ್ರಪ್ಪ ಮತ್ತು ಚಾಸಾ–4/ ಶ್ರೀ ಓಂಕಾರ ರವರು ಅವರ ಮನೆಯ ಮುಂದೆ ನಿಂತಿದ್ದಾಗ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಅಲ್ಲಿಗೆ ಬಂದು ನಿಮ್ಮಲ್ಲಿ 1 ನೇ ಆರೋಪಿ ಕಲ್ಲಿನಿಂದ ಚಾಸಾ–4 ರವರ ಬೆನ್ನಿಗೆ, ಬಲಗೈ ಮುಂಗೈಗೆ ಹೊಡಿದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಐದನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಚಾಸಾ–3 ರವರ ಎಡಗೈಹಿಡಿದು ನುಲಿಚಿರುತ್ತೀರಿ, ನಿಮ್ಮಲ್ಲಿ 2 ನೇ ಆರೋಪಿ ಗಲಾಗೆ ಬಿಡಿಸಲು ಬಂದ ಚಾಸಾ–5/ ಶ್ರೀಮತಿ ಶಾರದ ರವರನ್ನು ತಳ್ಳಿ ಬೀಳಿಸಿರುತ್ತೀರಿ, ನಿಮ್ಮಲ್ಲಿ 1 ಮತ್ತು 3 ನೇ ಆರೋಪಿತರು ಚಾಸಾ–2 ರವರ ತಲೆಗೆ ಬಲಭುಜಕ್ಕೆ ಹೊಡೆದಿರುತ್ತೀರಿ ಮತ್ತು ಅವರಿಗೆ

ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 3 ನೇ ಆರೋಪಿಗಳಾದ ನೀವು ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ ಆರೋಪಿ-1 ರಿಂದ 3 ಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1: Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 13.12.2024

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿತರ ಸಹಿಃ